ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 07/1/2020

# ದೆಹಲಿ ವಿಧಾನಸಭೆ ಚುನಾವಣೆ ಫೆ.8ಕ್ಕೆ

ವಿಶ್ವವಾಣಿ 7/1/20

**ದೆಹಲಿ:** ದೆಹಲಿ ವಿಧಾನಸಭೆ ಚುನಾವಣೆ ಫೆಬ್ರುವರಿ 8ರಂದು ನಡೆಯಲಿದ್ದು, 11ರಂದು ಫಲಿತಾಂಶ ಪ್ರಕಟವಾಗಲಿದೆ. ತಕ್ಷಣದಿಂದಲೇ ಚುನಾವಣಾ ನೀತಿ ಸಂಹಿತೆ ಜಾರಿಯಾಗಲಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಹಾಲಿ ವಿಧಾನಸಭೆ ಅವಧಿ ಫೆಬ್ರುವರಿ 22ಕ್ಕೆ ಕೊನೆಗೊಳ್ಳಲಿದೆ.

ಈ ಬಾರಿ ಒಟ್ಟು 1.46 ಕೋಟಿ ಮತದಾರರಿದ್ದಾರೆ. ಈ ಪೈಕಿ 80.55 ಲಕ್ಷ ಪುರುಷರು ಮತ್ತು 66.35 ಲಕ್ಷ ಮಹಿಳಾ ಮತದಾರರಿದ್ದಾರೆ. 13,750 ಬೂತ್‌ಗಳಲ್ಲಿ ಮತದಾನ ನಡೆಯಲಿದೆ ಎಂದು ಮುಖ್ಯ ಚುನಾವಣಾ ಆಯುಕ್ತ ಸುನೀಲ್ ಅರೋರಾ ತಿಳಿಸಿದ್ದಾರೆ.

70 ಸದಸ್ಯ ಬಲದ ದೆಹಲಿ ವಿಧಾನಸಭೆಗೆ 2015ರಲ್ಲಿ ನಡೆದಿದ್ದ ಚುನಾವಣೆಯಲ್ಲಿ ಅರವಿಂದ ಕೇಜ್ರಿವಾಲ್ ನೇತೃತ್ವದ ಆಮ್ ಆದ್ಮಿ ಪಕ್ಷ (ಎಎಪಿ) 67 ಸ್ಥಾನಗಳನ್ನು ಗೆದ್ದಿತ್ತು. ಕಳೆದ ವರ್ಷ ನಡೆದಿದ್ದ ಲೋಕಸಭಾ ಚುನಾವಣೆಯಲ್ಲಿ ದೆಹಲಿಯ ಎಲ್ಲ 7 ಕ್ಷೇತ್ರಗಳಲ್ಲೂ ಬಿಜೆಪಿ ಜಯ ಗಳಿಸಿತ್ತು.

